# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 388 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.12.2024 |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ರಾಜ್ಯದಲ್ಲಿರುವ ಗ್ರಾಮ ಆಡಳಿತ ಅಧಿಕಾರಿಗಳ ಸಂಖ್ಯೆ ಎಷ್ಟು; ಖಾಲಿಯಿರುವ, ಮಂಜೂರಾತಿಯಾಗಿರುವ ಹಾಗೂ ನೇಮಕಾತಿ ಹಂತದಲ್ಲಿರುವ ಹುದ್ದೆಗಳ ಸಂಖ್ಯೆ ಎಷ್ಟು; | ರಾಜ್ಯದ ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಒಟ್ಟು 9839 ಹುದ್ದೆಗಳು ಮಂಜೂರಾಗಿದ್ದು, ಇವರಲ್ಲಿ 7916 ಗ್ರಾಮ ಆಡಳಿತ ಅಧಿಕಾರಿಗಳು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿದ್ದು, 1923 ಹುದ್ದೆಗಳು ಖಾಲಿ ಇರುತ್ತವೆ.<br><br>1,000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಯು ಮುಗಿದಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ |
| (ಆ) | ಇತ್ತೀಚೆಗೆ ನಡೆದ 1000 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳ ನೇಮಕಾತಿಯ ಪರೀಕ್ಷೆಗೆ ಸರ್ಕಾರ ನಿಗದಿಪಡಿಸಿದ್ದ ಪಠ್ಯ ಕ್ರಮವೇನು; ಈ ಪರೀಕ್ಷೆಗೆ ಗ್ರಾಮ ಆಡಳಿತ ಅಧಿಕಾರಿಗೆ ಮತ್ತು ಕಂದಾಯ ಇಲಾಖೆಗೆ ಸಂಬಂಧಿಸಿದ ನಿರ್ದಿಷ್ಟ ಪತ್ರಿಕೆಯನ್ನು ಅಳವಡಿಸಿದ್ದಲ್ಲಿ, ಮುಂದೆ ಆಯ್ಕೆಯಾದ ಅಭ್ಯರ್ಥಿಯು ಇಲಾಖೆಯಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುತ್ತಿರಲಿಲ್ಲವೇ; ಹಾಗಿದ್ದಲ್ಲಿ, ಈ ಪರೀಕ್ಷೆಗೆ ಕಂದಾಯ ಇಲಾಖೆಗೆ ಸಂಬಂಧಿಸಿದ ಪಠ್ಯಕ್ರಮವನ್ನು ಪ್ರಶ್ನೆ ಪತ್ರಿಕೆಯಲ್ಲಿ ಅಳವಡಿಸದೇ ಇರಲು ಕಾರಣವೇನು; (ವಿವರ ನೀಡುವುದು) | ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ, ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡುವ ವಿಧಾನವನ್ನು ಜಾರಿಗೊಳಿಸಿ, ಕರ್ನಾಟಕ ರಾಜ್ಯ ಪತ್ರದಲ್ಲಿ ಅಧಿಸೂಚನೆ ಸಂಖ್ಯೆ:ಕಂಇ 240 ಬಿಎಸ್‌ಸಿ 2022, ದಿನಾಂಕ:02.02.2024 ರಂದು ಹೊರಡಿಸಲಾಗಿರುತ್ತದೆ.<br>ಅದರನ್ವಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಕರ್ನಾಟಕ ಸಾಮಾನ್ಯ ನೇಮಕಾತಿ ನಿಯಮ 2021 ರ ನಿಯಮಾವಳಿಗಳನ್ನು ಅಳವಡಿಸಿಕೊಂಡಿರುವುದಿಂದ, ಸದರಿ ನಿಯಮಗಳಲ್ಲಿ ಸೂಚಿಸಿರುವ ಪಠ್ಯಕ್ರಮವು ಈ ಕೆಳಕಂಡಂತಿದೆ;<br>**ಪತ್ರಿಕೆ-I ಸಾಮಾನ್ಯ ಜ್ಞಾನ (ಗರಿಷ್ಠ ಅಂಕಗಳು-100)**<br>**ಪತ್ರಿಕೆ-II (ಗರಿಷ್ಠ ಅಂಕಗಳು-100)**<br>a. ಸಾಮಾನ್ಯ ಕನ್ನಡ (ಗರಿಷ್ಠ ಅಂಕಗಳು-35) |

| | | |
|---|---|---|
| | | b. ಸಾಮಾನ್ಯ ಇಂಗ್ಲೀಷ್ (ಗರಿಷ್ಠ ಅಂಕಗಳು-35)<br>c. ಕಂಪ್ಯೂಟರ್ ಜ್ಞಾನ (ಗರಿಷ್ಠ ಅಂಕಗಳು-30)<br><br>ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು ಪಠ್ಯ ಕ್ರಮವನ್ನು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ರನ್ವಯ ನಿಗದಿಪಡಿಸಿರುವುದರಿಂದ, ಕಂದಾಯ ಇಲಾಖೆಗೆ ಸಂಬಂಧಿಸಿದ ಪಠ್ಯಕ್ರಮವನ್ನು ಪ್ರಶ್ನೆ ಪತ್ರಿಕೆಯಲ್ಲಿ ಅಳವಡಿಸಲು ಅವಕಾಶವಿರುವುದಿಲ್ಲ.<br>ಗ್ರಾಮ ಆಡಳಿತ ಅಧಿಕಾರಿಗಳು ನೇಮಕಾತಿ ಹೊಂದಿದ ನಂತರ 2 ವರ್ಷದ ಪರೀಕ್ಷಾರ್ಥ ಅವಧಿಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ನಿರ್ದಿಷ್ಟ ಪತ್ರಿಕೆಯನ್ನು ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ. |
| (ಇ) | ಮುಂಬರುವ ಹೊಸ ನೇಮಕಾತಿಗಳ ಪರೀಕ್ಷೆಗಳಲ್ಲಾದರೂ ಕಂದಾಯ ಇಲಾಖೆಗೆ ನಿಗಧಿಪಡಿಸಿದ ಪಠ್ಯಕ್ರಮವನ್ನು ನಿರ್ದಿಷ್ಠ ಪತ್ರಿಕೆಗೆ ಅಳವಡಿಸಬಹುದಲ್ಲವೇ; ಈ ಬಗ್ಗೆ ಸರ್ಕಾರದ ನಿಲುವೇನು? | ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನಡೆಸಲು ಅಧಿಸೂಚನೆ ಸಂಖ್ಯೆ:ಕಂಇ 240 ಬಿಎಸ್‌ಸಿ 2022, ದಿನಾಂಕ:02.02.2024 ಅನ್ನು ಹೊರಡಿಸಿ, ಪಠ್ಯ ಕ್ರಮವನ್ನು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ರಂತೆ ನಿಗದಿಪಡಿಸಿರುವುದರಿಂದ, ಸದರಿ ನಿಯಮಗಳನ್ವಯವೇ ಪಠ್ಯಕ್ರಮವನ್ನು ಅಳವಡಿಸಲಾಗುವುದು. |

**(ಸಂಖ್ಯೆ:ಕಂಇ 218 ಬಿಎಸ್‌ಸಿ 2024)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು